ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:ಯೋಜನೆ:18:ಇತರೆ:2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:10.01.2024

# ಸುತ್ತೋಲೆ

ವಿಷಯ: ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ( ಕೆ.ಡಿ.ಪಿ) ಸಭೆಗಳಿಗೆ ಹಾಜರಾಗುವ ಬಗ್ಗೆ,

****

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ, ವಿಭಾಗೀಯ ಮಟ್ಟ, ಜಿಲ್ಲಾ ಮಟ್ಟಗಳಲ್ಲಿ ಮಾನ್ಯ ಮುಖ್ಯ ಮಂತ್ರಿಗಳು / ಸಚಿವರು / ಜಿಲ್ಲಾ ಉಸ್ತುವಾರಿ ಸಚಿವರುಗಳ ಅಧ್ಯಕ್ಷತೆಯಲ್ಲಿ ನಡೆಯಲಿರುವ ಮಾಸಿಕ /ತ್ರೈಮಾಸಿಕ/ವಾರ್ಷಿಕ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ( ಕೆ.ಡಿ.ಪಿ) ಸಭೆಗಳಿಗೆ ಕಾಲೇಜು ಶಿಕ್ಷಣ ಇಲಾಖೆಯ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಕಡ್ಡಾಯವಾಗಿ ಹಾಜರಾಗಲು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

ಜಿಲ್ಲಾ ಮಟ್ಟದ ಕೆ.ಡಿ.ಪಿ ಸಭೆಗಳಿಗೆ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರು ಹಾಜರಾಗತಕ್ಕದ್ದು, ತಾಲ್ಲೂಕು ಮಟ್ಟದ ಕೆ.ಡಿ.ಪಿ ಸಭೆಗಳಿಗೆ ವಿಧಾನ ಸಭೆ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು ಹಾಜರಾಗತಕ್ಕದ್ದು, ಭೌತಿಕ ಪ್ರಗತಿ ಮತ್ತು ಆರ್ಥಿಕ ಪ್ರಗತಿ ವಿವರಗಳೊಂದಿಗೆ ಸಭೆಗೆ ಹಾಜರಾಗಿ ಈ ಕಛೇರಿಗೆ ವರದಿ ಸಲ್ಲಿಸಲು ಸೂಚಿಸಲಾಗಿದೆ.

(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯ ಎಲ್ಲಾ ಜಂಟಿ ನಿರ್ದೇಶಕರುಗಳು,
2. ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು,

ಪ್ರತಿಗಳು:

1. ಪ್ರಧಾನ ಕಾರ್ಯದರ್ಶಿಗಳು , ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮೂರನೇ ಮಹಡಿ , ಎಂ ಎಸ್ ಬಿಲ್ಡಿಂಗ್ ಬೆಂಗಳೂರು-560 001.-ಮಾಹಿತಿಗಾಗಿ
2. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.- ಮಾಹಿತಿಗಾಗಿ
3. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು-ಮಾಹಿತಿಗಾಗಿ ಹಾಗೂ ಸಭಾ ಸೂಚನೆಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಪರಿಚಲಿಸಲು
4. ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಕ ಅಧಿಕಾರಿಗಳು- ಮಾಹಿತಿಗಾಗಿ ಹಾಗೂ ಸಭಾ ಸೂಚನೆಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಪರಿಚಲಿಸಲು.
5. ಮ್ಯಾನೇಜರ್/ಅಧೀಕ್ಷಕರು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು.- ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು

plan_37_2023-24_KDP Meeting